# ಕಳಂಕಿತರಿಗೆ ಸುಪ್ರೀಂ ಕಡಿವಾಣ

## ರಾಜಕೀಯ ಪಕ್ಷಗಳಿಗೆ ಮಹತ್ವದ ಸೂಚನೆ ನೀಡಿದ ಕೋರ್ಟ್

**ನವದೆಹಲಿ:** ರಾಜಕೀಯದಲ್ಲಿ ಅಪರಾಧೀಕರಣ ಹೆಚ್ಚಾಗುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿರುವ ಸುಪ್ರೀಂಕೋರ್ಟ್, ಕ್ರಿಮಿನಲ್ ಹಿನ್ನೆಲೆ ಇರುವವರನ್ನು ಚುನಾವಣಾ ರಾಜಕೀಯದಿಂದ ದೂರ ಇರಿಸುವಂತೆ ರಾಜಕೀಯ ಪಕ್ಷಗಳಿಗೆ ಸಲಹೆ ನೀಡಿದೆ. ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಕೆಲವು ಕಡ್ಡಾಯ ಸೂಚನೆಗಳನ್ನೂ ಕೊಟ್ಟಿದೆ.

ಉಮೇದುದಾರರ ವಿಶ್ವಾಸಾರ್ಹತೆ, ಸಾಧನೆ, ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿದ್ದರೆ ಅಂಥ ಮಾಹಿತಿಯನ್ನು ಪತ್ರಿಕೆ, ವಿದ್ಯುನ್ಮಾನ ಮಾಧ್ಯಮ, ಸಾಮಾಜಿಕ ಜಾಲತಾಣ ಮತ್ತು ಪಕ್ಷದ ವೆಬ್‌ಸೈಟ್‌ಗಳಲ್ಲಿ ಕಡ್ಡಾಯವಾಗಿ ಪ್ರಕಟಿಸಬೇಕು. ಜನರಿಗೆ ತಮ್ಮ ಮುಂದಿರುವ ಆಯ್ಕೆಗಳ (ಅಭ್ಯರ್ಥಿಗಳ) ಸಂಪೂರ್ಣ ವಿವರ ತಿಳಿದಿರಬೇಕು ಎಂದು ನ್ಯಾಯಮೂರ್ತಿಗಳಾದ ಆರ್.ಎಫ್. ನಾರಿಮನ್ ಮತ್ತು ಎಸ್.ರವೀಂದ್ರ ಭಟ್ ಅವರನ್ನೊಳಗೊಂಡ ನ್ಯಾಯಪೀಠ ಹೇಳಿದೆ.

ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ 48 ತಾಸಿನಲ್ಲಿ ಆತನ ಕುರಿತ ಎಲ್ಲ ಮಾಹಿತಿಯನ್ನು ಜನರಿಗೆ ನೀಡಬೇಕು ಮತ್ತು ನಾಮಪತ್ರ ಸಲ್ಲಿಸಿದ 24 ತಾಸಿನೊಳಗೆ ಈ ವಿವರಗಳನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕು. 72 ತಾಸಿನೊಳಗೆ ಚುನಾವಣಾ ಆಯೋಗಕ್ಕೂ ಈ ಮಾಹಿತಿಯನ್ನು ಸಲ್ಲಿಸಬೇಕು ಎಂದು ನ್ಯಾಯಪೀಠ ಸೂಚಿಸಿದೆ. ಈ ಸೂಚನೆಗಳನ್ನು ಪಾಲಿಸದಿದ್ದರೆ ನ್ಯಾಯಾಂಗ ನಿಂದನೆಗೆ ಗುರಿಯಾಗಬೇಕಾಗುತ್ತದೆ ಎಂದು ಎಚ್ಚರಿಸಿರುವ ನ್ಯಾಯಪೀಠ, ಇಂಥ ಸಂದರ್ಭ ಬಂದರೆ ನ್ಯಾಯಾಂಗ ನಿಂದನೆ ಅರ್ಜಿ ದಾಖಲಿಸುವಂತೆ ಚುನಾವಣಾ ಆಯೋಗಕ್ಕೆ ಸೂಚಿಸಿದೆ.

ರಾಜಕೀಯ ಪಕ್ಷಗಳು ಕಳಂಕಿತರಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಹೆಚ್ಚು ಅವಕಾಶ ನೀಡುತ್ತಿವೆ. ಇದನ್ನು ತಡೆಯಲು ಸರ್ಕಾರ ಮತ್ತು ಚುನಾವಣಾ ಆಯೋಗದಿಂದ ಗಂಭೀರ ಪ್ರಯತ್ನಗಳು ನಡೆಯುತ್ತಿಲ್ಲ. 2018ರಲ್ಲಿ ಸುಪ್ರೀಂಕೋರ್ಟ್ ನೀಡಿದ ಸೂಚನೆ ಪಾಲನೆ ಆಗಿಲ್ಲ ಎಂದು ಬಿಜೆಪಿ ಮುಖಂಡ ಮತ್ತು ವಕೀಲ ಅಶ್ವಿನಿ ಉಪಾಧ್ಯಾಯ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಇದರ ವಿಚಾರಣೆ ವೇಳೆ ನ್ಯಾಯಪೀಠ ಈ ಮಹತ್ವದ ಸೂಚನೆಗಳನ್ನು ನೀಡಿದೆ.

### ಸಂಸದರ ಕ್ರಿಮಿನಲ್ ಹಿನ್ನೆಲೆ

| ವರ್ಷ | ಶೇಕಡಾವಾರು |
|---|---|
| 2004 | 24 |
| 2009 | 30 |
| 2014 | 34 |
| 2019 | 43 |



### ಚುನಾವಣಾ ಆಯೋಗದ ವಾದ ಏನು?

ಅಭ್ಯರ್ಥಿಗಳ ಅಪರಾಧದ ಹಿನ್ನೆಲೆಯ ಮಾಹಿತಿಯನ್ನು ಸಾರ್ವಜನಿಕವಾಗಿ ಪ್ರಕಟಿಸುವುದರಿಂದ ಹೆಚ್ಚಿನ ಪರಿಣಾಮವೇನೂ ಆಗುತ್ತಿಲ್ಲ. ಆದ್ದರಿಂದ ಕ್ರಿಮಿನಲ್ ಹಿನ್ನೆಲೆ ಇರುವವರಿಗೆ ಕಡ್ಡಾಯವಾಗಿ ಟಿಕೆಟ್ ನೀಡಬಾರದು ಎಂಬ ಕಟ್ಟಳೆಯನ್ನು ರಾಜಕೀಯ ಪಕ್ಷಗಳಿಗೆ ವಿಧಿಸಬೇಕು ಎಂದು ಚುನಾವಣಾ ಆಯೋಗ ನ್ಯಾಯಪೀಠವನ್ನು ಕೋರಿತು. ರಾಜಕೀಯದಲ್ಲಿ ಅಪರಾಧಿಗಳ ಸಂಖ್ಯೆ ಚುನಾವಣೆಯಿಂದ ಚುನಾವಣೆಗೆ ಏರುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದ ಆಯೋಗ, ಈ ಕುರಿತ ವಿವರಯನ್ನು ಸುಪ್ರೀಂಕೋರ್ಟ್ ನೀಡಿದೆ. ಇದಕ್ಕೆ ಪೂರಕವಾಗಿ ಸಂಸದರ ಕ್ರಿಮಿನಲ್ ಹಿನ್ನೆಲೆಯ ಮಾಹಿತಿಯನ್ನು ಸರ್ವೋಚ್ಚ ನ್ಯಾಯಾಲಯದ ಮುಂದೆ ಇರಿಸಿದೆ.

### ಸುಪ್ರೀಂ ಸೂಚನೆ

- » ಅಭ್ಯರ್ಥಿಗಳ ಕ್ರಿಮಿನಲ್ ಹಿನ್ನೆಲೆಯನ್ನು ಕಡ್ಡಾಯವಾಗಿ ಪ್ರಕಟಿಸಬೇಕು.
- » ಒಂದು ವೇಳೆ ಕ್ರಿಮಿನಲ್ ಹಿನ್ನೆಲೆ ಇರುವವರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದರೆ ಅಂಥವರ ಆಯ್ಕೆಯನ್ನು ಸಮರ್ಥಿಸಿಕೊಳ್ಳುವಂತಹ ಕಾರಣಗಳನ್ನು ಸಾರ್ವಜನಿಕ ಗೊಳಿಸಬೇಕು.
- » ಅಭ್ಯರ್ಥಿ ವಿವರಗಳನ್ನು ಪತ್ರಿಕೆ, ವಿದ್ಯುನ್ಮಾನ ಮಾಧ್ಯಮ, ಸಾಮಾಜಿಕ ಜಾಲತಾಣ, ಪಕ್ಷಗಳ ವೆಬ್‌ಸೈಟ್‌ಗಳಲ್ಲಿ ಪ್ರಕಟಿಸಬೇಕು.
- » ಈ ಸೂಚನೆ ಪಾಲಿಸದಿದ್ದರೆ ನ್ಯಾಯಾಂಗ ನಿಂದನೆ ಪ್ರಕರಣ ಎದುರಿಸಬೇಕು

### 12 ವಿಶೇಷ ಕೋರ್ಟ್ ಸ್ಥಾಪನೆ

ಶಾಸಕರು ಮತ್ತು ಸಂಸದರ ವಿರುದ್ಧ ಇರುವ ಪ್ರಕರಣಗಳ ತ್ವರಿತ ವಿಚಾರಣೆಗಾಗಿ ದೇಶಾದ್ಯಂತ ವಿಶೇಷ ಕೋರ್ಟ್‌ಗಳನ್ನು ಸ್ಥಾಪಿಸುವಂತೆ ಸುಪ್ರೀಂಕೋರ್ಟ್ ಸೂಚಿಸಿದ್ದ ಹಿನ್ನೆಲೆಯಲ್ಲಿ 12 ವಿಶೇಷ ಕೋರ್ಟ್‌ಗಳನ್ನು 11 ರಾಜ್ಯಗಳಲ್ಲಿ 2018ರ ಸೆಪ್ಟೆಂಬರ್ ಮತ್ತು ನಂತರದಲ್ಲಿ ಸ್ಥಾಪಿಸಲಾಗಿದೆ. ದೆಹಲಿಯಲ್ಲಿ 2, ಆಂಧ್ರಪ್ರದೇಶ, ತೆಲಂಗಾಣ, ಕರ್ನಾಟಕ, ಕೇರಳ, ತಮಿಳುನಾಡು, ಉತ್ತರ ಪ್ರದೇಶ, ಬಿಹಾರ, ಪಶ್ಚಿಮ ಬಂಗಾಳ, ಮಹಾರಾಷ್ಟ್ರ, ಮಧ್ಯಪ್ರದೇಶಗಳಲ್ಲಿ ತಲಾ ಒಂದು ಕೋರ್ಟ್‌ಗಳು ಕಾರ್ಯ ನಿರ್ವಹಿಸುತ್ತಿವೆ. ಸಂಸದರು ಮತ್ತು ಶಾಸಕರ ವಿರುದ್ಧ 4,122 ಪ್ರಕರಣಗಳು ವಿವಿಧ ಕೋರ್ಟ್‌ಗಳಲ್ಲಿ ಇತ್ಯರ್ಥಕ್ಕೆ ಬಾಕಿ ಇವೆ ಎಂದು 2018ರಲ್ಲಿ ಡಿಸೆಂಬರ್‌ನಲ್ಲಿ ಸುಪ್ರೀಂಕೋರ್ಟ್‌ಗೆ ನೀಡಿರುವ ಮಾಹಿತಿಯಲ್ಲಿ ಉಲ್ಲೇಖಿಸಲಾಗಿದೆ.

### ಈ ಹಿಂದೆಯೂ ಸೂಚನೆ ನೀಡಿದ್ದ ಸುಪ್ರೀಂ

ಗಂಭೀರ ಸ್ವರೂಪದ ಕ್ರಿಮಿನಲ್ ಪ್ರಕರಣ ಎದುರಿಸುತ್ತಿರುವವರನ್ನು ಚುನಾವಣೆಯಲ್ಲಿ ಸ್ಪರ್ಧಿಸದಂತೆ ತಡೆಯಲು ಕೇಂದ್ರ ಸರ್ಕಾರ ಕೂಡಲೇ ಕಾನೂನು ರಚಿಸುವುದು ಅಗತ್ಯ ಎಂದು ಸುಪ್ರೀಂಕೋರ್ಟ್‌ನ ಐವರು ನ್ಯಾಯಮೂರ್ತಿಗಳ ಸಾಂವಿಧಾನಿಕ ಪೀಠ ಈ ಹಿಂದೆ ಹೇಳಿತ್ತು. ಅಭ್ಯರ್ಥಿಗಳು ತಮ್ಮ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ಕುರಿತು ಚುನಾವಣೆ ದಿನಾಂಕದೊಳಗೆ ಮೂರು ಸಾರಿ ಪತ್ರಿಕೆಗಳಲ್ಲಿ ಜಾಹೀರಾತು ನೀಡಬೇಕು ಎಂದೂ ಸುಪ್ರೀಂಕೋರ್ಟ್ ಸೂಚಿಸಿತ್ತು.

> ಚುನಾವಣೆಯಲ್ಲಿ ಗೆಲ್ಲುತ್ತಾರೆಂಬುದೊಂದೇ ಅಭ್ಯರ್ಥಿಗಳ ಆಯ್ಕೆಗೆ ಸಮರ್ಥನೆಯಲ್ಲ. ಉಮೇದುವಾರನ ಅರ್ಹತೆ, ಶಿಕ್ಷಣ, ಸಾಧನೆ, ಗುಣಗಳ ಬಗ್ಗೆಯೂ ರಾಜಕೀಯ ಪಕ್ಷಗಳು ಪರಾಮರ್ಶೆ ಮಾಡಬೇಕು.
>
> । ಸುಪ್ರೀಂಕೋರ್ಟ್‌ನ ದ್ವಿಸದಸ್ಯ ನ್ಯಾಯಪೀಠ